ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರಃ1732/2018

ಚಾಸಾಃ9 ಪ್ರಾಸಾಃ6

ದಿನಾಂಕಃ 25.10.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಸುಧಾಕರ ಭಂಡಾರಿ |
| ತಂದೆಯ ಹೆಸರು | : | ನಾಗು ಭಂಡಾರಿ |
| ವಯಸ್ಸು | : | 57 ವರ್ಷ |
| ಉದ್ಯೋಗ | : | ಸೆಕ್ಯೂರಿಟಿ ಕೆಲಸ |
| ವಾಸ ಸ್ಥಳ | : | ಹುಣ್ಸೆಮಕ್ಕಿ, ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ.ರವರಿಂದಃ**

ಮೃತ ಸಂಕು ಪೂಜಾರ್ತಿ ರವರ ಪರಿಚಯ ಇದೆ. ಆರೋಪಿಯ ಪರಿಚಯ ಇಲ್ಲ. ಸಾಕ್ಷಿಗೆ ನಿಪಿ.2 ನ್ನು ತೋರಿಸಿದ್ದು, ಅದರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ.2(ಸಿ) ಎಂದು ಗುರುತಿಸಲಾಯಿತು. ನಿಪಿ.4 ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ದಾಖಲೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಆಗ ಚಾಸಾ.8ರವರು ಹಾಜರಿದ್ದರು. ಅಪಘಾತವಾದ ಮಾರನೇ ದಿನ ಸದ್ರಿ ಸಹಿಯನ್ನು ಮಾಡಿರುತ್ತೇನೆ. ಆಕೆ ಅಪಘಾತದಿಂದ ಮೃತಪಟ್ಟಿರುತ್ತಾಳೆ. ಪೊಲೀಸರು ಸೂಚಿಸಿದಂತೆ ದಾಖಲೆಗೆ ಸಹಿ ಮಾಡಿರುತ್ತೇನೆ. ನಿಪಿ.4ನ್ನು ಎಲ್ಲಿ ತೆಗೆದಿರುವುದು ಎಂದು ನೆನಪಿಲ್ಲ. ಎಷ್ಟು ಸಹಿ ಮಾಡಿದೆ ಎಂದು ನೆನಪಿಲ್ಲ. ನಿಪಿ.2 ರಲ್ಲಿ ಎನು ಬರೆದಿದೆ ಎಂದು ನನಗೆ ತಿಳಿದಿಲ್ಲ. ನಿಪಿ.4 ರಲ್ಲಿ ಕಂಡು ಬರುವ ಜಾಗ ಯಾವುದು ಎಂದು ಗುರುತಿಸಲು ಆಗುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ**

ದಿಃ03.09.2018 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ನಾನು ಮತ್ತು ಚಾಸಾ-8 ಹಾಜರಿದ್ದು, ಚಾಸಾ.1ರವರು ತೋರಿಸಿದ ಸ್ಥಳದಲ್ಲಿ ನಮ್ಮ ಸಮಕ್ಷಮ

ಪಂಚನಾಮೆಯನ್ನು ಬೆಳಿಗ್ಗೆ 11 ರಿಂದ 11-45 ರವರೆಗೆ ಪಂಚನಾಮೆ ಮಾಡಿ ಪೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಸದ್ರಿ ಕ್ರಮವನ್ನು ನನ್ನ ಸಮಕ್ಷಮ ಮಾಡಿ ನಿಪಿ.4ರ ಪೋಟೋ ತೆಗೆದಿದ್ದರೂ ಆರೋಪಿಯು ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ,**

ಪೊಲೀಸ್ ಠಾಣೆಯಲ್ಲಿ ಪಂಚನಾಮೆಗೆ ಒಂದು ಸಹಿ ಮಾಡಿರುತ್ತೇನೆ. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ಹೇಳಲು ಆಗುವುದಿಲ್ಲ. ನನ್ನ ಸಮಕ್ಷಮ ಸದ್ರಿ ಕ್ರಮವನ್ನು ವಹಿಸಿಲ್ಲ.

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**